# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **1203** |
| ಸದಸ್ಯರ ಹೆಸರು | : | ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | **18.03.2025** |
| ಉತ್ತರಿಸುವ ಸಚಿವರು | : | ಮಾನ್ಯ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು. |

| ಕ್ರ. ಸಂ. | ಪ್ರಶ್ನೆಗಳು | ಉತ್ತರ |
|---|---|---|
| (ಅ) | ರಾಜ್ಯದ ನಿರುದ್ಯೋಗಿ ಯುವಕ ಯುವತಿಯವರಿಗೆ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆ ಸ್ಥಾಪಿಸಲು ಸರ್ಕಾರದ ವತಿಯಿಂದ ನೀಡುತ್ತಿರುವ ಸೌಲಭ್ಯಗಳೇನು; | ರಾಜ್ಯದ ನಿರುದ್ಯೋಗಿ ಯುವಕ ಯುವತಿಯವರಿಗೆ ಸಣ್ಣ ಕೈಗಾರಿಕೆ ಸ್ಥಾಪಿಸಲು ಕೇಂದ್ರ ಸರ್ಕಾರದ ವತಿಯಿಂದ ಪಿಎಂಇಜಿಪಿ ಯೋಜನೆಯು ಜಾರಿಯಲ್ಲಿರುತ್ತದೆ:<br><br>**ಪ್ರಧಾನ ಮಂತ್ರಿಗಳ ಉದ್ಯೋಗ ಸೃಜನೆ ಯೋಜನೆ (ಪಿಎಂಇಜಿಪಿ),**<br><br>• 2008-09ನೇ ಸಾಲಿನಿಂದ ಪ್ರಧಾನ ಮಂತ್ರಿಗಳ ಉದ್ಯೋಗ ಸೃಷ್ಟಿ ಕಾರ್ಯಕ್ರಮವನ್ನು (PMEGP) ಜಾರಿಗೊಳಿಸಲಾಗಿದ್ದು, ಸ್ಥಳೀಯ ಸಂಪನ್ಮೂಲಗಳ ಆಧಾರದ ಮೇಲೆ ಉತ್ಪಾದನೆ ಮತ್ತು ಸೇವಾ ವಲಯಗಳ ಅಡಿಯಲ್ಲಿ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸುವ ಮೂಲಕ ವಿದ್ಯಾವಂತ ನಿರುದ್ಯೋಗಿ ಯುವಕರಿಗೆ ಉದ್ಯೋಗವನ್ನು ಒದಗಿಸುವುದು ಯೋಜನೆಯ ಉದ್ದೇಶವಾಗಿದೆ.<br>• ಈ ಯೋಜನೆಯಡಿ ವಿವಿಧ ಬ್ಯಾಂಕ್‌ಗಳ ಮೂಲಕ ಉತ್ಪಾದನಾ ವಲಯಕ್ಕೆ ರೂ.50.00 ಲಕ್ಷ ಮತ್ತು ಸೇವಾ ವಲಯಕ್ಕೆ ರೂ.20.00 ಲಕ್ಷದವರೆಗೆ ಸಾಲವನ್ನು ವಿಸ್ತರಿಸಲಾಗಿದೆ. ಯೋಜನೆ ಯಡಿಯಲ್ಲಿ ಲಭ್ಯವಿರುವ ಮಾರ್ಜಿನ್ ಹಣದ ವಿವರಗಳು ಕೆಳಕಂಡಂತಿವೆ:<br><br>ವರ್ಗ / ಅಂಚು ಹಣ (ನಗರ / ಗ್ರಾಮೀಣ):<br>ಸಾಮಾನ್ಯ ವರ್ಗದವರಿಗೆ — 15% / 25%<br>ಪ.ಜಾ, ಪ.ಪಂ, ಹಿಂದುಳಿದ ವರ್ಗ, ಅಲ್ಪಸಂಖ್ಯಾತ, ಮಾಜಿಸೈನಿಕ, ಅಂಗವಿಕಲ, ಮಹಿಳೆ — 25% / 35%<br><br>ರಾಜ್ಯದಲ್ಲಿ ಸಮಗ್ರ ಕೈಗಾರಿಕಾ ಅಭಿವೃದ್ಧಿಗಾಗಿ ಸರ್ಕಾರವು ದಿನಾಂಕ: 08.02.2025 ರಂದು ನೂತನ ಕೈಗಾರಿಕಾ ನೀತಿ 2025-30ನ್ನು ಜಾರಿಗೆ ತಂದಿರುತ್ತದೆ. ಸದರಿ ನೀತಿಯಡಿ ಈ ಕೆಳಕಂಡಂತೆ ವಿವಿಧ ರೀತಿಯ ರಿಯಾಯಿತಿ ಮತ್ತು ಪ್ರೋತ್ಸಾಹಗಳನ್ನು ನೀಡಿ ಕೈಗಾರಿಕೆಗಳನ್ನು ಉತ್ತೇಜಿಸಲಾಗುತ್ತಿದೆ:<br>1. ಬಂಡವಾಳ ಹೂಡಿಕೆ ಸಹಾಯಧನ/ ವಹಿವಾಟು ಆಧಾರಿತ ಹೂಡಿಕೆ ಸಹಾಯಧನ.<br>2. ಮುದ್ರಾಂಕ ಶುಲ್ಕ ವಿನಾಯಿತಿ ಹಾಗೂ ನೋಂದಣಿ ಶುಲ್ಕ ವಿನಾಯಿತಿ. |

<table>
<tr><td></td><td></td><td>3. ಭೂ ಪರಿವರ್ತನಾ ಶುಲ್ಕ ಮರುಪಾವತಿ.<br>4. ವಿದ್ಯುತ್ ಶುಲ್ಕದ ಮೇಲಿನ ತೆರಿಗೆ ವಿನಾಯಿತಿ.<br>5. ವಿದ್ಯುತ್ ಚ್ಛಕ್ತಿ ಸಹಾಯಧನ.<br>6. ಕೈಗಾರಿಕಾ ವಸತಿ ನಿಲಯ ಸಹಾಯಧನ<br>7. ತಂತ್ರಜ್ಞಾನ ಅಳವಡಿಕೆ & ನವೋನ್ವೇಶಣೆ ಉತ್ತೇಜನ<br>8. ರಫ್ತು ಘಟಕಗಳಿಗೆ ಪ್ರೋತ್ಸಾಹ.<br>9. ಸುಸ್ಥಿರತೆ ಮತ್ತು ಜವಾಬ್ದಾರಿಯುತ ಕೈಗಾರಿಕೀರಣ ಉತ್ತೇಜನ<br>10. ಲಾಜಿಸ್ಟಿಕ್ಸ್ ಮತ್ತು ಉಗ್ರಾಣ ಸಹಾಯಧನ</td></tr>
<tr><td>(ಆ)</td><td>ಕಳೆದ 02 ವರ್ಷಗಳಲ್ಲಿ ರಾಜ್ಯದಲ್ಲಿ ಪ್ರಾರಂಭವಾದ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು; ಸರ್ಕಾರ ಅವುಗಳಿಗೆ ನೀಡಿದ ಪ್ರೋತ್ಸಾಹ ಧನ/ಸಬ್ಸಿಡಿಯ ಮೊತ್ತ/ಸಹಾಯ ಧನವೆಷ್ಟು;</td><td>ರಾಜ್ಯದಲ್ಲಿ ಜುಲೈ 2020 ರಿಂದ ಎಂ.ಎಸ್.ಎಂ.ಇ ನೋಂದಣಿಯನ್ನು ಭಾರತ ಸರ್ಕಾರದ ಉದ್ಯಮ್ ತಂತ್ರಾಂಶದಲ್ಲಿ ಮಾಡಲಾಗುತ್ತಿದೆ. ಸದರಿ ತಂತ್ರಾಶದಲ್ಲಿದ್ದಂತೆ ಕಳೆದ 02 ವರ್ಷಗಳಲ್ಲಿ (2022-23 & 2023-24) ನೋಂದಣಿಯಾಗಿರುವ ಎಂ.ಎಸ್.ಎಂ.ಇ ಉದ್ಯಮಗಳ ವಿವರಗಳನ್ನು ಕೆಳಕಂಡಂತೆ ನೀಡಲಾಗಿದೆ: ಜಿಲ್ಲಾವಾರು ವಿವರಗಳನ್ನು ಅನುಬಂಧ-1 ರಲ್ಲಿ ಒದಗಿಸಲಾಗಿದೆ.
<table>
<tr><th>ವರ್ಷ</th><th>ಸೂಕ್ಷ್ಮ</th><th>ಸಣ್ಣ</th><th>ಮಧ್ಯಮ</th></tr>
<tr><td>2022-23</td><td>4,17,054</td><td>6,907</td><td>325</td></tr>
<tr><td>2023-24</td><td>5,11,725</td><td>5,136</td><td>263</td></tr>
</table>
ಕಳೆದ 02 ವರ್ಷಗಳಲ್ಲಿ ಕೈಗಾರಿಕಾ ನೀತಿ 2020-25 ರ ಅಡಿಯಲ್ಲಿ ನೀಡಿದ ಸಹಾಯ ಧನ ವಿವರಗಳು ಈ ಕೆಳಕಂಡಂತಿವೆ.
<table>
<tr><th>ವರ್ಷ</th><th>ಘಟಕಗಳು</th><th>ಬಿಡುಗಡೆಯಾದ ಸಹಾಯಧನ.<br>(ರೂ. ಲಕ್ಷಗಳಲ್ಲಿ)</th></tr>
<tr><td>2022-23</td><td>571</td><td>5924.10</td></tr>
<tr><td>2023-24</td><td>620</td><td>9198.11</td></tr>
</table></td></tr>
<tr><td>(ಇ)</td><td>ಮಾಲಿನ್ಯ ರಹಿತವಾದ ಸಣ್ಣ ಮತ್ತು ಅತಿ ಸಣ್ಣ ಕೈಗಾರಿಕೆಗಳನ್ನು ವಸತಿ ಪ್ರದೇಶದಲ್ಲಿ ಪ್ರಾರಂಭಿಸಲು ಅವಕಾಶವಿದೆಯೇ? (ಸಂಬಂಧಿಸಿದ ಆದೇಶ /ಕಾಯ್ದೆಯ ಪ್ರತಿಯನ್ನು ನೀಡುವುದು)</td><td>ಮಾಲಿನ್ಯ ನಿಯಂತ್ರಣ ಮಂಡಳಿಯು ವಸತಿ ಪ್ರದೇಶದಲ್ಲಿ ಯಾವುದೇ ಉದ್ದಿಮೆಗಳನ್ನು ಪ್ರಾರಂಭಿಸಲು ಮತ್ತು ಕಾರ್ಯನಿರ್ವಹಿಸಲು ಸಮ್ಮತಿ ನೀಡಿರುವುದಿಲ್ಲ. ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 2206/1998 ರಲ್ಲಿ (ಪ್ಯಾರಾ-12) ಆದೇಶದಲ್ಲಿ ಸೂಚಿಸಲಾಗಿದೆ.<br><br>ಕೆಲವು ಸೇವಾ ಆಧಾರಿತ ಚಟುವಟಿಕೆಗಳು / ಉದ್ದಿಮೆಗಳನ್ನು ಪ್ರಾರಂಭಿಸಲು ಮತ್ತು ಕಾರ್ಯನಿರ್ವಹಿಸಲು ಮಂಡಳಿಯ ಅನುಮತಿ ಯೊಂದಿಗೆ ಸ್ಥಳೀಯ ಸಂಸ್ಥೆಯ ಅನುಮತಿ ಪಡೆದು ಕಾರ್ಯನಿರ್ವಹಿಸಲು ಅವಕಾಶವಿರುತ್ತದೆ.</td></tr>
</table>

**ಸಿಐ 35 ಎಸ್‌ಎಸ್‌ಐ 2025**

**(ಶರಣಬಸಪ್ಪ ದರ್ಶನಾಪೂರ)**
ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ
ಉದ್ದಿಮೆಗಳ ಸಚಿವರು